# ಮುಖ್ಯ ಚುನಾವಣಾಧಿಕಾರಿಯವರ ಕಛೇರಿ-ಕರ್ನಾಟಕ

ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿಇಸುಇ/29/SVEEP/2022 ದಿನಾಂಕ: 08.02.2024

ಗೆ,

1. ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಯುಕ್ತರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ SVEEP ನೋಡಲ್ ಅಧಿಕಾರಿಗಳು.
7. ನಿರ್ದೇಶಕರು, ಪದವಿ-ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು
8. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ.
9. ನಿರ್ದೇಶಕರು, ಕಾಲೇಜು, ಶಿಕ್ಷಣ ಇಲಾಖೆ.
10. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ.
11. ಸಾರ್ವಜನಿಕ ಶಿಕ್ಷಣ ಇಲಾಖೆ ಎಲ್ಲಾ ಜಂಟಿ ನಿರ್ದೇಶಕರುಗಳು.
12. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಮತ್ತು ಎಲ್ಲಾ ಜಿಲ್ಲಾ ಶಿಕ್ಷಕರ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರುಗಳು ಹಾಗೂ ಉಪ ನಿರ್ದೇಶಕರು (ಅಭಿವೃದ್ಧಿ)
13. ಎಲ್ಲಾ ಜಿಲ್ಲೆಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು.

ಮಾನ್ಯರೆ...

ವಿಷಯ:- ವಿಶ್ವವಿದ್ಯಾಲಯಗಳ ಅನುದಾನ ಆಯೋಗ (UGC) ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು (AICTE) ಗಳ ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ಫೆಬ್ರವರಿ-2024 ರಲ್ಲಿ ಎರಡು ವಾರಗಳ ಅಭಿಯಾನವನ್ನು ಹಮ್ಮಿಕೊಳ್ಳುವ ಬಗ್ಗೆ.

ಉಲ್ಲೇಖ:-
1. ಭಾರತ ಚುನಾವಣಾ ಆಯೋಗದ ಪತ್ರ ಸಂ: 491/SVEEP-EL/SCHOOL/2023, Dated: 02.02.2024.
2. ಉನ್ನತ ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ ಪತ್ರ ಸಂಖ್ಯೆ: 16/38/2022-U1A ದಿನಾಂಕ: 01.02.2024.
3. ಭಾರತ ಚುನಾವಣಾ ಆಯೋಗದ ಅರೆ ಸರ್ಕಾರಿ ಪತ್ರ ಸಂ: ECI/1/2023, Dated: 07.11.2023.
4. ಈ ಕಛೇರಿಯ ಪತ್ರ ಸಮ ಸಂಖ್ಯೆ: ಸಿಇಸುಇ/29/SVEEP/2023, ದಿನಾಂಕ: 20.11.2023.

******

ಭಾರತ ಚುನಾವಣಾ ಆಯೋಗದ ಮುಖ್ಯ ಧ್ಯೇಯ "ಯಾವುದೇ ಮತದಾರ ಮತದಾನದಿಂದ ಹೊರಗುಳಿಯಬಾರದು" ಎಂಬುದಾಗಿದೆ. ಅದರಂತೆ ಒಳಗೊಳ್ಳುವ, ಸುಗಮ, ನೈತಿಕ, ಮಾಹಿತಿಯುಕ್ತ ಮತ್ತು ಭಾಗವಹಿಸುವ ಚುನಾವಣೆಗಳನ್ನು ನಡೆಸುವುದು ಆಯೋಗದ ಮುಖ್ಯ ಉದ್ದೇಶವಾಗಿರುತ್ತದೆ. ಭವಿಷ್ಯ ಹಾಗೂ ಯುವ ಮತದಾರರಲ್ಲಿ ಮತದಾನದ ಕುರಿತು ಅರಿವು ಮತ್ತು ಜಾಗೃತಿ ಮೂಡಿಸುವ ಸಲುವಾಗಿ ಕೇಂದ್ರ ಶಿಕ್ಷಣ

ಸಚಿವಾಲಯದೊಂದಿಗೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆಗಳನ್ನು ಒಳಗೊಂಡಂತೆ ಒಡಂಬಡಿಕೆಯನ್ನು ದಿನಾಂಕ: 02.11.2023 ರಂದು ಮಾಡಿಕೊಂಡಿದೆ.

ಭಾರತ ಚುನಾವಣಾ ಆಯೋಗವು ಉನ್ನತ ಶಿಕ್ಷಣ ಸಚಿವಾಲಯದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆ (MoU signed between Ministry of Education and Election Commission of India) ಪ್ರಕಾರ ಯುವ ಮತದಾರರಲ್ಲಿ, ಮತದಾನದ ಅರಿವು ಮತ್ತು ಮತದಾರರ ಶಿಕ್ಷಣವನ್ನು ಶಾಲಾ ಕಾಲೇಜುಗಳಲ್ಲಿ ಔಪಚಾರಿಕ ಶಿಕ್ಷಣವನ್ನು ನೀಡಿ, ಮತದಾನದ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಮಾಡುವುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಈ ಕೆಳಗಿನ ಲಿಂಕ್‌ಗೆ ಭೇಟಿ ನೀಡಿ. https://drive.google.com/drive/folders/199911kTcwINSZpDdDql8sCaSAxyKRukw?usp=sharing. ಪ್ರಾದೇಶಿಕ ಭಾಷೆಯಲ್ಲಿ ಪಡೆಯಲು ಈ ಕೆಳಗಿನ ಲಿಂಕ್‌ಗೆ ಭೇಟಿ ನೀಡಿ. https://drive.google.com/drive/folders/1MWOliMic4c5MwAwWNjDi1vDGRutHUddb?usp=drive_link

ಭಾರತ ಚುನಾವಣಾ ಆಯೋಗ ಮತ್ತು ಉನ್ನತ ಶಿಕ್ಷಣ ಸಚಿವಾಲಯದೊಂದಿಗೆ ದಿನಾಂಕ 01.02.2024 ರಂದು ಚರ್ಚಿಸಿದಂತೆ, ವಿಶ್ವವಿದ್ಯಾಲಯಗಳ ಅನುದಾನ ಆಯೋಗ (UGC) ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು (AICTE) ಗಳ ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ NSS / NYKS ವೇದಿಕೆಗಳ ಮುಖಾಂತರ ಯಾವುದೇ ರಾಜಕೀಯ ಪ್ರೇರಿತವಲ್ಲದ, ಪಕ್ಷಾತೀತವಾಗಿ ಮತದಾನದ ಶಿಕ್ಷಣ ಮತ್ತು ಮತದಾನದ ಅರಿವು/ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಕೈಗೊಳ್ಳಲು ಫೆಬ್ರವರಿ ತಿಂಗಳಿನಲ್ಲಿ ಎರಡು ವಾರಗಳ ಅಭಿಯಾನವನ್ನು ಹಮ್ಮಿಕೊಳ್ಳಲು ನಿರ್ಣಯಿಸಲಾಗಿದೆ. ಈ ಸಂಬಂಧ ಕೈಗೊಂಡ ಚಟುವಟಿಕೆಗಳ ಸಾಧನೆಯ ಬಗ್ಗೆ My Bharat portal ನಲ್ಲಿ ದಾಖಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ

(ಕುಮಾರ್ ರಾವ್. ಎಂ)
ಅಪರ ಮುಖ್ಯ ಚುನಾವಣಾಧಿಕಾರಿಗಳು
ಸಿ.ಆ.ಸು.ಇಲಾಖೆ (ಚುನಾವಣೆಗಳು)

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/155/ಚುನಾವಣೆ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:12.02.2024.

### ಪರಿಚಲನಾ ಆದೇಶ

ವಿಶ್ವವಿದ್ಯಾಲಯಗಳ ಅನುದಾನ ಆಯೋಗ (UGC) ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು (AICTE) ಗಳ ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ಫೆಬ್ರವರಿ-2024 ರಲ್ಲಿ ಎರಡು ವಾರಗಳ ಅಭಿಯಾನವನ್ನು ಹಮ್ಮಿಕೊಳ್ಳುವ ಬಗ್ಗೆ ಮುಖ್ಯ ಚುನಾವಣಾಧಿಕಾರಿಯವರ ಕಛೇರಿ – ಕರ್ನಾಟಕ ರವರ ಪತ್ರ ಸಂಖ್ಯೆ:ಸಿಆಸುಇ/29/SVEEP/2022 ದಿನಾಂಕ:08.02.2024 ನ್ನು ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

for 14/2/24
ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2) ಮುಖ್ಯ ಚುನಾವಣಾಧಿಕಾರಿಗಳ ಆಪ್ತಶಾಖೆಗೆ, ಸಿ.ಆ.ಸು. ಇಲಾಖೆ (ಚುನಾವಣೆಗಳು) ಮುಖ್ಯ ಚುನಾವಣಾಧಿಕಾರಿಯವರ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.
3) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4) ಕಛೇರಿ ಪ್ರತಿ